ಆಯೋಗಕ್ಕೆ ವರದಿ ಸಲ್ಲಿಸಲಾಗಿದೆ. ವರದಿಯಲ್ಲಿ ಕರ್ನಾಟಕ ಕೊಳಚೆ ನಿರ್ಮೂಲನ ಮಂಡಲಿಯು ಅನಧಿಕೃತವಾಗಿ ಜಲಮಂಡಲಿಯ ಅನುಮತಿಯಿಲ್ಲದೆ ಜಲಮಂಡಲಿ ಕೊಳವೆ ಮಾರ್ಗಗಳ ಸೇವಾರಸ್ತೆಯಲ್ಲಿ ಕೊರೆದಿರುವುದನ್ನು ತಿಳಿಸುತ್ತಾ ಅಲ್ಲಿಯ ನಿವಾಸಿಗಳಿಗೆ ಕುಡಿಯುವ ನೀರಿಗೆ ತೊಂದರೆಯಾಗದಂತೆ, ಉಚಿತವಾಗಿ ಜಲಮಂಡಲಿ ಲಾರಿ ಮುಖಾಂತರ ಕುಡಿಯುವ ನೀರನ್ನು ಸರಬರಾಜು ಮಾಡಲಾಗುತ್ತಿದೆ ಎಂದು ತಿಳಿಸಲಾಗಿದೆ. ಆದ್ದರಿಂದ ನಿವಾಸಿಗಳಿಗೆ ಕುಡಿಯುವ ನೀರಿನ ವ್ಯವಸ್ಥೆ ಜಾರಿಯಲ್ಲಿದೆ.

ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಭರ್ತಿ ಮಾಡುವುದು

546 (978) ಶ್ರೀ ನರೇಂದ್ರಬಾಬು ನೆ. ಲ. (ಮಹಾಲಕ್ಷ್ಮಿಲೇಔಟ್):–ಮಾನ್ಯ ಮುಖ್ಯಮಂತ್ರಿಗಳು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಆರೋಗ್ಯ ಇಲಾಖೆಯಲ್ಲಿ ಎಷ್ಟು ವೈದ್ಯರ ಹುದ್ದೆಗಳು ಖಾಲಿ ಇವೆ.

ಆ) ಇವುಗಳ ಭರ್ತಿಗೆ ಏನು ಕ್ರಮ ಕೈಗೊಳ್ಳಲಾಗಿದೆ;

ಇ) ಎಷ್ಟು ಜನ ವೈದ್ಯರು ಅಮಾನತ್ತಿನಲಿದ್ದಾರೆ ಹಾಗೂ ಈಗಾಗಲೇ ಎಷ್ಟು ಜನ ವೈದ್ಯರಿಗೆ ಪುನರ್ ನೇಮಕ ಮಾಡಲಾಗಿದೆ; (ವಿವರ ನೀಡುವುದು).

ಈ) ಅಮಾನತ್ತುಗೊಳಿಸಿ ವರ್ಷಗಟ್ಟಲೇ ಸಂಬಳ ನೀಡುವ ಬದಲು ಇವರನ್ನು ಖಾಲಿ ಇರುವ ಹುದ್ದೆಗಳಿಗೆ ನೇಮಕ ಮಾಡಲು ಸರ್ಕಾರಕ್ಕೆ ಏನಾದರೂ ತೊಂದರೆ ಇದೆಯೆ;

ಉ) ಅಮಾನತ್ತುಗೊಂಡಿರುವ ವೈದ್ಯರಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದ ವೈದ್ಯರು ಎಷ್ಟು ಜನ; ಇವರಲ್ಲಿ ಎಷ್ಟು ಜನ ವೈದ್ಯರಿಗೆ ಮರು ನೇಮಕಾತಿ ಆದೇಶ ನೀಡಲಾಗಿದೆ? (ವಿವರ ನೀಡುವುದು)

ಶ್ರೀ ಡಿ. ವಿ. ಸದಾನಂದಗೌಡ (ಮಾನ್ಯ ಮುಖ್ಯಮಂತ್ರಿಗಳು):–

ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವ್ಯಾಪ್ತಿಯಡಿ ಬರುವ ಸರ್ಕಾರಿ

ಆಸ್ಪತ್ರೆ ಕೇಂದ್ರಗಳಲ್ಲಿ ಒಟ್ಟು 2600 ತಜ್ಞ ವೈದ್ಯರ ಹುದ್ದೆಗಳು ಮಂಜೂರಾಗಿದ್ದು, 1557 ತಜ್ಞ ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ ಹಾಗೂ 1043 ಹುದ್ದೆಗಳು ಖಾಲಿ ಇವೆ. ಮುಂದುವರೆದು 2586 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳು ಮಂಜೂರಾಗಿದ್ದು, 2225 ಹುದ್ದೆಗಳು ಭರ್ತಿಯಾಗಿವೆ ಹಾಗೂ 361 ಹುದ್ದೆಗಳು ಖಾಲಿ ಇವೆ.

ಆ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ತೆಗೆದುಕೊಂಡ ಕ್ರಮದ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ಇ) ಅಮಾನತ್ತಿನಲ್ಲಿದ್ದ 37 ವೈದ್ಯರ ಪೈಕಿ 15 ವೈದ್ಯರನ್ನು ಸೇವೆಯಲ್ಲಿ ಪುನರ್ ಸ್ಥಾಪಿಸಲಾಗಿದೆ.

ಈ)ಯಾವುದೇ ತೊಂದರೆ ಇರುವುದಿಲ್ಲ ಹಾಗೂ ಒಂದು ವರ್ಷಕ್ಕೂ ಮೇಲ್ಪಟ್ಟು ಅಮಾನತ್ತಿರಲ್ಲಿರುವ ಒಂದು ಪ್ರಕರಣ ಮಾತ್ರ ಇರುತ್ತದೆ.

ಉ) ವೈದ್ಯರು/ಸಿಬ್ಬಂದಿಯನ್ನು ಸೇವೆಯಿಂದ ಅಮಾನತ್ತು ಮಾಡುವಾಗ ಆಗಲಿ ಅಥವಾ ಪುನರ್ ಸ್ಥಾಪಿಸುವಾಗ ಆಗಲಿ ಜಾತಿ ಆಧಾರದ ಮೇಲೆ ಮಾಡಲಾಗುವುದಿಲ್ಲ. ಆದ್ದರಿಂದ, ಇಂತಹ ಅಂಕಿ-ಅಂಶಗಳನ್ನು ನಿರ್ವಹಣೆ ಮಾಡುತ್ತಿಲ್ಲ.

ಅನುಬಂಧ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಡಿ ಬರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿಯಿರವ ತಜ್ಞ ವೈದ್ಯರು, ವೈದ್ಯರು ಹಾಗೂ ವೈದ್ಯೇತರ ಹುದ್ದೆಗಳನ್ನು ತುಂಬಲು ತೆಗೆದುಕೊಂಡ ಕ್ರಮಗಳ ವಿವರ:

1. ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ (ಎನ್.ಆರ್.ಹೆಚ್.ಎಂ.) ಅಡಿಯಲ್ಲಿ ಸ್ತ್ರೀರೋಗ ತಜ್ಞತೆ, ಅರವಳಿಕೆ ಹಾಗೂ ಮಕ್ಕಳ ತಜ್ಞತೆಯಲ್ಲಿ ಗೌರವಧನದ ಆಧಾರದ ಮೇಲೆ ತಜ್ಞ ವೈದ್ಯರನ್ನು ನೇಮಿಸಿಕೊಳ್ಳಲು ಸಿ-ಗುಂಪಿನ ಜಿಲ್ಲೆಗಳು ಹಾಗೂ ಉತ್ತರ ಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಅನ್ವಯಿಸುವಂತೆ ಮಾಸಿಕ ರೂ. 70,000 ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ ರೂ. 50,000 ದಂತೆ ನೀಡಲು ಅವಕಾಶ ಕಲ್ಪಿಸಲಾಗಿದೆ.

2. ಇತರೆ ತಜ್ಞತೆಗಳಿಗೆ (ಮಕ್ಕಳ ತಜ್ಞರು, ಸ್ತ್ರೀರೋಗ ತಜ್ಞರು ಹಾಗೂ ಅರವಳಿಕೆ ತಜ್ಞರನ್ನು ಹೊರತುಪಡಿಸಿ) ಸಂಬಂಧಪಟ್ಟಂತೆ ವಿಶ್ವ ಬ್ಯಾಂಕ್ ನೆರವಿನ ಕರ್ನಾಟಕ ಆರೋಗ್ಯ ಪದ್ಧತಿ ಅಭಿವೃದ್ಧಿ ಸುಧಾರಣೆ ಯೋಜನೆ (ಕೆ.ಹೆಚ್.ಎಸ್.ಡಿ.ಆರ್.ಪಿ.) ಅಡಿಯಲ್ಲಿ ಮೇಲೆ ತಿಳಿಸಿದ ಜಿಲ್ಲೆಗಳಲ್ಲಿ ಕ್ರಮವಾಗಿ, ಮಾಸಿಕ ರೂ. 65,000 ಹಾಗೂ ರೂ. 50,000 ದಂತೆ ಗೌರವಧನ ನೀಡಲಾಗುತ್ತಿದೆ. ಮುಂದುವರೆದು, ರೀಟೈನರ್‌ಷಿಪ್ ಆಧಾರದಲ್ಲಿ ನೇಮಕ ಮಾಡುವ ಎಲ್ಲಾ ತಜ್ಞ ವೈದ್ಯರಿಗೆ ಸಂಬಂಧಿಸಿದಂತೆ ಸಿ–ಗುಂಪಿನ ಜಿಲ್ಲೆಗಳು ಹಾಗೂ ಉತ್ತರ ಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಅನ್ವಯಿಸುವಂತೆ ಮಾಸಿಕ ರೂ 10,000 ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ ರೂ 8,000 ದಂತೆ ಗೌರವಧನ ನೀಡಿ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಮುಂದುವರೆದು, ಸದರಿ ತಜ್ಞರು ಹೊರ ರೋಗಿ ವಿಭಾಗದಲ್ಲಿ ಕಾರ್ಯನಿರ್ವಹಿಸಿದ್ದಲ್ಲಿ ದಿನವೊಂದಕ್ಕೆ ರೂ. 1,000 ದಂತೆ ಗೌರವ ಧನ ನೀಡಲು ಅವಕಾಶ ಕಲ್ಪಿಸಲಾಗಿದೆ ಆದಾಗ್ಯೂ. ಅನೇಕ ಜಿಲ್ಲೆಗಳಲ್ಲಿ ತಜ್ಞರು ಮುಂದೆ ಬರುತ್ತಿಲ್ಲ.

3. ಎಂ.ಬಿ.ಬಿ.ಎಸ್. ವೈದ್ಯರಿಗೆ ಅರವಳಿಕೆ ಹಾಗೂ ಸಿಜೇರಿಯನ್ ಶಸ್ತ್ರಚಿಕಿತ್ಸೆಗಳಿಗೆ ತರಬೇತಿ ನೀಡಲಾಗುತ್ತಿದ್ದು, ಈ ಮೂಲಕ ಸ್ತ್ರೀರೋಗ ಹಾಗೂ ಅರವಳಿಕೆ ತಜ್ಞರ ಕೊರೆತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ.

4. ತಜ್ಞರ ಹುದ್ದೆಗಳಿಗೆ ನೇರ ನೇಮಕಾತಿ ಮಾಡಿಕೊಳ್ಳಲು ಇಲಾಖೆಯ ವ್ಯಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರಲಾಗಿದೆ. ಪ್ರಸ್ತುತ 600 ತಜ್ಞ ವೈದ್ಯರ ಹುದ್ದೆಗಳನ್ನು ನೇರ ನೇಮಕಾಗಿ ಮೂಲಕ ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗದಲ್ಲಿ ಪ್ರಕ್ರಿಯೆ ಜಾರಿಯಲ್ಲಿದೆ.

5. ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಖಾಲಿ ಹುದ್ದೆಗಳನ್ನು ನಿಯಮಾನುಸಾರ ಕಾಲಕಾಲಕ್ಕೆ ಭರ್ತಿ ಮಾಡಲಾಗುತ್ತಿದೆ. ಆದಾಗ್ಯೂ ನೇಮಕಾತಿ ಆದೇಶ ನೀಡಿದ ಕೆಲವು ವೈದ್ಯರು ಕಾರ್ಯವರದಿ ಮಾಡಿಕೊಳ್ಳಲು ಮುಂದೆ ಬರುತ್ತಿಲ್ಲವಾದ್ದರಿಂದ ಎಲ್ಲಾ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸಾಧ್ಯವಾಗಿಲ್ಲ.